## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : **2017-18ನೇ** ಸಾಲಿನ ರಾಜ್ಯ ಆಯವ್ಯಯದ ಘೋಷಣೆಯನ್ವಯ **ರೂ.500.00ಲಕ್ಷಗಳ** ಪೈಕಿ **ರೂ.387.00ಲಕ್ಷಗಳನ್ನು** KSBDB ಮಂಡಳಿಗೆ ಉದ್ದೇಶಿತ ಯೋಜನೆಗೆ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ :

1. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 36 ಜೈಅಯೋ 2017, ದಿನಾಂಕ 22.05.2017.
2. ಆರ್ಥಿಕ ಇಲಾಖೆಯ ಸಹಮತಿ ಸಂಖ್ಯೆ ಆಇ/312/ವೆಚ್ಚ-6/2017, ದಿನಾಂಕ 15.05.2017.
3. ಯೋಜನಾ ಇಲಾಖೆಯ ಸಹಮತಿ ಸಂಖ್ಯೆ ಯೋಇ/27/ ಜಿಯೋವಿ/2017, ದಿನಾಂಕ 20.05.2017.

**ಪ್ರಸ್ತಾವನೆ :**

**2017-18ನೇ** ಸಾಲಿನ ರಾಜ್ಯ ಆಯವ್ಯಯ ಘೋಷಣೆಯಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಮಂಡಳಿಗೆ ಸಂಬಂಧಿಸಿದಂತೆ ಬಯೋ ಡಿಸೇಲ್ ಕಾಂಪ್ಲೆಕ್ಸ್ ಮತ್ತು ಜೈವಿಕ ಇಂಧನ ಗುಣಮಟ್ಟದ ಪ್ರಯೋಗ ಶಾಲೆಯನ್ನು ನಿರ್ಮಿಸಲು **ರೂ.500.00ಲಕ್ಷಗಳನ್ನು** ಲೆಕ್ಕ ಶೀರ್ಷಿಕೆ **2501-04-105-0-03-059(ಯೋಜನೆ)**ಯಡಿ ಒದಗಿಸಿದೆ.

ಈ ಅನುದಾನದ ಪೈಕಿ **ರೂ.387.00ಲಕ್ಷಗಳನ್ನು** ಜೈವಿಕ ಇಂಧನ ಗುಣಮಟ್ಟದ ಪ್ರಯೋಗ ಶಾಲೆ ಹಾಗೂ ಅಗತ್ಯ ಚಟುವಟಿಕೆಗಳಿಗಾಗಿ ವಿನಿಯೋಗಿಸುವ ನಿಟ್ಟಿನಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ಮೇಲೆ ಓದಲಾದ (1)ರ ಆದೇಶದಲ್ಲಿ ಹೊರಡಿಸಿದೆ.

ಆದ್ದರಿಂದ **2017-18ನೇ** ಸಾಲಿನ ರಾಜ್ಯ ಆಯವ್ಯಯದಡಿ ಘೋಷಿಸಲಾದಂತೆ **ರೂ.500.00ಲಕ್ಷಗಳ** ಪೈಕಿ **ರೂ.387.00ಲಕ್ಷಗಳನ್ನು** ಜೈವಿಕ ಇಂಧನ ಗುಣಮಟ್ಟದ ಪ್ರಯೋಗ ಶಾಲೆ ಹಾಗೂ ಅಗತ್ಯ ಚಟುವಟಿಕೆಗಳ ಅನುಷ್ಠಾನದಲ್ಲಿ ಜೈವಿಕ ಇಂಧನ ಸಂಶೋಧನೆಗೆ ವಿಜ್ಞಾನಿಗಳನ್ನು ತೆಗೆದುಕೊಳ್ಳುವ ಬಗ್ಗೆ ಯೋಜನಾ ವರದಿಯಲ್ಲಿ ಸ್ಪಷ್ಟವಾಗಿ ತಿಳಿಸುವ ಹಾಗೂ ನಿಗದಿಪಡಿಸಿರುವ ಅನುದಾನದಲ್ಲಿ ಗುರುತಿಸಿಕೊಂಡಿರುವ ಕಾಲಾಮಿತಿಯೊಳಗೆ ಯೋಜನೆಯನ್ನು ಅನುಷ್ಠಾನಗೊಳಿಸಲು ವ್ಯವಸ್ಥಾಪಕ ನಿರ್ದೇಶಕರು, KSBDB ರವರಿಗೆ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ ; ಗ್ರಾಪ/36/ಜೈಅಯೋ/2017, ಬೆಂಗಳೂರು, ದಿನಾಂಕ 27.07.2017.**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, **2017-18** ಸಾಲಿನಲ್ಲಿ ರಾಜ್ಯ ಆಯವ್ಯಯದಡಿ ಘೋಷಿಸಲಾದಂತೆ **ರೂ.500.00ಲಕ್ಷಗಳ** ಪೈಕಿ **ರೂ.387.00ಲಕ್ಷ**(ಮುನ್ನೂರ ಎಂಭತ್ತೇಳು ಲಕ್ಷ ರೂಪಾಯಿಗಳೂ ಮಾತ್ರ)ಗಳನ್ನು ಜೈವಿಕ ಇಂಧನ ಗುಣಮಟ್ಟದ ಪ್ರಯೋಗ ಶಾಲೆ ಹಾಗೂ ಅಗತ್ಯ ಚಟುವಟಿಕೆಗಳಿಗಾಗಿ ಮಂಜೂರು ಮಾಡುವ ಕುರಿತಂತೆ ಹಾಗೂ ಈ ಯೋಜನೆಯ

ಅನುಷ್ಠಾನದಲ್ಲಿ ಜೈವಿಕ ಇಂಧನ ಸಂಶೋಧನೆಗೆ ವಿಜ್ಞಾನಿಗಳನ್ನು ತೆಗೆದುಕೊಳ್ಳುವ ಬಗ್ಗೆ ಯೋಜನಾ ವರದಿಯಲ್ಲಿ ಸ್ಪಷ್ಟವಾಗಿ ತಿಳಿಸುವ ಹಾಗೂ ನಿಗದಿಪಡಿಸಿರುವ ಅನುದಾನದಲ್ಲಿ ಗುರುತಿಸಿಕೊಂಡಿರುವ ಕಾಲಾಮಿತಿಯೊಳಗೆ ಯೋಜನೆಯನ್ನು ಅನುಷ್ಠಾನಗೊಳಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಮಂಡಳಿ, ಬೆಂಗಳೂರು ರವರಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು ರವರು ಗ್ರಾಂಟ್–ಇನ್–ಏಡ್ ಬಿಲ್ಲನ್ನು ಸಲ್ಲಿಸಿ, ನಿರ್ದೇಶಕರು (ಗ್ರಾಮೂಸೌ–2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿರವರ ಮೇಲು ರುಜು ಪಡೆದು ಖಜಾನೆಯಿಂದ ಅನುದಾನ ಪಡೆಯತಕ್ಕದ್ದು. ಬಿಡುಗಡೆ ಮಾಡಿದ ಅನುದಾನವನ್ನು ಉದ್ದೇಶಿತ ಯೋಜನೆಗಳಿಗಾಗಿ ಮಾತ್ರ ವಿನಿಯೋಗಿಸಿ, ವೆಚ್ಚದ ವಿವರಗಳನ್ನು ಸರ್ಕಾರಕ್ಕೆ ನಿಗದಿತವಾಗಿ ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿ **ಸಂಖ್ಯೆ:ಆಇ/312/ವೆಚ್ಚ–6/2017,** ಆರ್ಥಿಕ ಇಲಾಖೆ (ವೆಚ್ಚ–6) ದಿನಾಂಕ **15.05.2017** ಮತ್ತು ಯೋಜನಾ ಇಲಾಖೆಯ ಸಹಮತಿ **ಸಂಖ್ಯೆ ಯೋಇ/27/ಜಿಯೋವಿ/2017,** ದಿನಾಂಕ **20.05.2017**ರಲ್ಲಿ ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ–2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, KSBDB ಬೆಂಗಳೂರು.
3. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಅಪಂ ರಾಜ್ ಇಲಾಖೆ.
2. ಉಪ ನಿರ್ದೇಶಕರು (ತ್ರಾಂತಿಕ), ಗ್ರಾಮೂಸೌ ಕೋಶ, ಗ್ರಾಅಪ ಇಲಾಖೆ.
3. ಉಪ ನಿರ್ದೇಶಕರು, TNMC, 2ನೇ ಮಹಡಿ, ಖನಿಜ ಭವನ, ಬೆಂಗಳೂರು.
4. ವಿಶೇಷಾಧಿಕಾರಿ, ಇಲಾಖಾ ಗಣಕ ಕೇಂದ್ರ, ಗ್ರಾಅಪಂ.ಇಲಾಖೆ.
5. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.